| ಕರ್ನಾಟಕ ವಿಧಾನ ಪರಿಷತ್ತು | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 522 |
| ಮಾನ್ಯ ವಿಧಾನಪರಿಷತ್ತು ಸದಸ್ಯರ ಹೆಸರು: | ಶ್ರೀ ಎಂ.ನಾಗರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | 10.07.2023 |
| ಉತ್ತರಿಸಬೇಕಾದ ಸಚಿವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| 1 | ರಾಜ್ಯದ ಜಿಲ್ಲಾ ಮಟ್ಟದಲ್ಲಿ ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳನ್ನು ಪ್ರಾರಂಭಿಸಲು ಅನುವಾಗುವಂತೆ 200ಕ್ಕೂ ಹೆಚ್ಚು ಹಾಸಿಗೆ ಸಾಮರ್ಥ್ಯವಿರುವ ಎಷ್ಟು ಸರ್ಕಾರಿ ಅಸ್ಪತ್ರೆಗಳನ್ನು ಕಳೆದ ಮೂರು ವರ್ಷಗಳಲ್ಲಿ ಎನ್.ಎಂ.ಸಿ ಅನುಮೋದನೆ ಪಡೆದು ಬೋಧನಾ ಆಸ್ಪತ್ರೆಗಳನ್ನಾಗಿ ಪರಿವರ್ತಿಸಲಾಗಿದೆ. ಈ ಯೋಜನೆಗೆ ಮೀಸಲಿಟ್ಟಿರುವ ಹಣವೆಷ್ಟು ಮತ್ತು ಇದುವರೆವಿಗೂ ಖರ್ಚು ಮಾಡಿರುವ ಹಣವೆಷ್ಟು? | ರಾಜ್ಯದ ಜಿಲ್ಲಾ ಮಟ್ಟದಲ್ಲಿ ಸ್ನಾತ್ತಕೋತ್ತರ ವೈದ್ಯಕೀಯ ಕೋರ್ಸುಗಳನ್ನು ಪ್ರಾರಂಭಿಸಲು ಅನುವಾಗುವಂತೆ 200ಕ್ಕೂ ಹೆಚ್ಚು ಹಾಸಿಗೆ ಸಾಮರ್ಥ್ಯವಿರುವ 06 ಸರ್ಕಾರಿ ಆಸ್ಪತ್ರೆಗಳನ್ನು ಪಡೆದು ಮೂರು ವರ್ಷಗಳಲ್ಲಿ ಎನ್.ಎಂ.ಸಿ ಅನುಮೋದನೆ ಪಡೆದು ಬೋಧನಾ ಆಸ್ಪತ್ರೆಗಳನ್ನಾಗಿ ಪರಿವರ್ತಿಸಲಾಗಿದೆ.<br>ಈ ಯೋಜನೆಗಾಗಿ ಯಾವುದೇ ಹಣವನ್ನು ಮೀಸಲಿಟ್ಟಿರುವುದಿಲ್ಲ. |
| 2 | ರಾಜ್ಯದ ಅಪಘಾತಕ್ಕೊಳಗಾದ ರೋಗಿಗಳಿಗೆ ಆಸ್ಪತ್ರೆಗೆ ದಾಖಲಾದ 48 ಗಂಟೆಯೊಳಗಾಗಿ 76 ಅವಶ್ಯ ಜೀವರಕ್ಷಕ ಆರೋಗ್ಯ ಸೇವೆಗಳನ್ನು ಒದಗಿಸುವ ಸಲುವಾಗಿ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಯಡಿಯಲ್ಲಿ ನಿಗದಿಪಡಿಸಿರುವ ಅನುದಾನದಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿರುವ ಕಾರ್ಯಕ್ರಮ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಎಷ್ಟು ಅಪಘಾತಕ್ಕೊಳಗಾದ ಸಂತ್ರಸ್ತರಿಗೆ ಈ ಟ್ರಸ್ಟ್ ಮುಖಾಂತರ ಅವಶ್ಯ ಆರೋಗ್ಯ ಸೇವೆಗಳನ್ನು ತುರ್ತಾಗಿ ಒದಗಿಸಲಾಗಿದೆ ಮತ್ತು ಇದಕ್ಕಾಗಿ ವ್ಯಯಿಸಿದ ಮೊತ್ತವೆಷ್ಟು? (ವಿವರ ನೀಡುವುದು) | ಹೌದು,<br>ರಾಜ್ಯದಲ್ಲಿ ಅಪಘಾತಕ್ಕೊಳಗಾದ BPL ಹಾಗು APL ರೋಗಿಗಳಿಗೆ ಆಸ್ಪತ್ರೆಗೆ ದಾಖಲಾದ 48 ಘಂಟೆಗಳೊಳಗಾಗಿ 76 ಅವಶ್ಯ ಜೀವ ರಕ್ಷಕ ಆರೋಗ್ಯ ಸೇವೆಗಳನ್ನು ಅನುಮೋದಿತ ಪ್ಯಾಕೇಜ್ ದರಗಳನ್ವಯ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರಡಿ ನಿಗದಿಪಡಿಸಿರುವ ಅನುದಾನದಲ್ಲಿ ಒದಗಿಸಲು ಸರ್ಕಾರದ ಆದೇಶ ಸಂಖ್ಯೆ:ಆಕುಕ 102 ಸಿಜಿಇ 2022, ದಿನಾಂಕ:08.04.2022 ರಲ್ಲಿ ಸರ್ಕಾರದ ಅನುಮೋದನೆ ನೀಡಲಾಗಿದೆ. ಅದರಂತೆ ಈವರೆಗೆ 543 ಪ್ರಿಯಾಥ್‌ಗಳು ಸ್ವೀಕೃತಗೊಂಡಿದ್ದು ವೈದ್ಯಕೀಯ ಸೌಲಭ್ಯ ಒದಗಿಸಿದ ನೋಂದಾಯಿತ ಆಸ್ಪತ್ರೆಗೆ ರೂ. 91.29ಲಕ್ಷ ಮೊತ್ತವನ್ನು ಪಾವತಿಸಲಾಗಿರುತ್ತದೆ. |

**ಸಂಖ್ಯೆ:ಎಂಇಡಿ 84 ಆರ್‌ಐ 2023**

**(ಡಾ:ಶರಣಪ್ರಕಾಶ್ ಆರ್ ಪಾಟೀಲ್)**

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ

ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು